**All India Radio: Bangalore**
**National Bulletin In Kannada**
**04.06.2026  07.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**04.06.2026  07.35 a.m.**

**<><><><>**

ಮುಖ್ಯಾಂಶಗಳು

1. ಪ್ರಧಾನಿ ನರೇಂದ್ರ ಮೋದಿ, ವೆನೆಜುವೆಲಾ ಹಂಗಾಮಿ ಅಧ್ಯಕ್ಷೆ ರೊಡ್ರಿಗಸ್ ನಡುವೆ ದೆಹಲಿಯಲ್ಲಿಂದು ಮಾತುಕತೆ
2. ಅಹಮದಾಬಾದ್‌ನಲ್ಲಿ ಮೊದಲ ವಿಶ್ವ ಯೋಗಾಸನ ಕ್ರೀಡಾ ಚಾಂಪಿಯನ್ ಶಿಪ್ ಆರಂಭ ; ಪ್ರಧಾನಿ ನರೇಂದ್ರ ಮೋದಿ ವರ್ಚುವಲ್ ಮೂಲಕ ಭಾಗಿ
3. ಕೇಂದ್ರ ಗೃಹ ಸಚಿವ ಅಮಿತ್ ಶಾ ಅಧ್ಯಕ್ಷತೆಯಲ್ಲಿ ಶಿಲ್ಲಾಂಗ್‌ನಲ್ಲಿ ಈಶಾನ್ಯ ರಾಜ್ಯಗಳ ಮಂಡಳಿಯ ೭೩ನೇ ಸಭೆ
4. ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರಿಂದ ಯಾದಗಿರಿಯಲ್ಲಿಂದು ರೈತರ ತರಬೇತಿ ಮತ್ತು ಸೌಲಭ್ಯ ಕೇಂದ್ರ ಉದ್ಘಾಟನೆ
5. ಸ್ಯಾಫ್ ಫುಟ್ಬಾಲ್ ಚಾಂಪಿಯನ್ ಶಿಪ್ ; ಭೂತಾನ್ ವಿರುದ್ಧ ಜಯಗಳಿಸಿ ಫೈನಲ್ ತಲುಪಿದ ಭಾರತದ ವನಿತೆಯರ ತಂಡ

<><><><>

ಪ್ರಧಾನಿ ನರೇಂದ್ರ ಮೋದಿ ನವದೆಹಲಿಯಲ್ಲಿಂದು ವೆನೆಜುವೆಲಾದ ಹಂಗಾಮಿ ಅಧ್ಯಕ್ಷೆ ಡೆಲ್ಸಿ ರೊಡ್ರಿಗಸ್ ಅವರೊಂದಿಗೆ ಮಾತುಕತೆ ನಡೆಸಲಿದ್ದಾರೆ. ಭಾರತ-ವೆನೆಜುವೆಲಾ ಸಂಬಂಧಗಳು ಮತ್ತು ಇಂಧನ ಭದ್ರತೆ, ವ್ಯಾಪಾರ ಮತ್ತು ಹೂಡಿಕೆ, ಔಷಧಗಳು, ಆರೋಗ್ಯ, ರಕ್ಷಣೆ, ಸಾರಿಗೆ ಮತ್ತು ನವೀಕರಿಸಬಹುದಾದ ಇಂಧನ ಕ್ಷೇತ್ರಗಳಲ್ಲಿ ಮತ್ತಷ್ಟು ಸಹಕಾರಕ್ಕಾಗಿ ಮಾರ್ಗಗಳ ಅನ್ವೇಷಣೆ ಕುರಿತು ಚರ್ಚೆ ನಡೆಯಲಿವೆ. ರೊಡ್ರಿಗಸ್ ಐದು ದಿನಗಳ ಭಾರತ ಭೇಟಿಗಾಗಿ ನಿನ್ನೆ ನವದೆಹಲಿಗೆ ಆಗಮಿಸಿದ್ದಾರೆ.  ಅವರ ಜೊತೆ ವಿದೇಶಾಂಗ ವ್ಯವಹಾರಗಳು, ಆರ್ಥಿಕತೆ ಮತ್ತು ಹಣಕಾಸು, ವಿಜ್ಞಾನ ಮತ್ತು ತಂತ್ರಜ್ಞಾನ, ಸಂವಹನ ಮತ್ತು ಮಾಹಿತಿ ಮತ್ತು ಸಾರಿಗೆ ಸಚಿವರನ್ನು ಒಳಗೊಂಡ ನಿಯೋಗವು ಆಗಮಿಸಿದೆ. ಭಾರತದ ತಾಂತ್ರಿಕ ಮತ್ತು ಕೈಗಾರಿಕಾ ಸಾಮರ್ಥ್ಯಗಳ ಬಗ್ಗೆ ಖುದ್ದು

ಮಾಹಿತಿ ಪಡೆಯಲು ಮತ್ತು ಸಹಯೋಗದ ಅವಕಾಶಗಳನ್ನು ಅನ್ವೇಷಿಸಲು ವೆನೆಜುವೆಲಾದ ನಿಯೋಗವು ಇಂಧನ, ಔಷಧ ಮತ್ತು ಆಟೋ ವಲಯಗಳಿಗೆ ಸಂಬಂಧಿಸಿದ ಹಲವಾರು ತಾಣಗಳಿಗೆ ಭೇಟಿ ನೀಡಲಿದೆ. ಭಾರತವು ಇಂಧನ ಮತ್ತು ಹೂಡಿಕೆ ಕ್ಷೇತ್ರಗಳಲ್ಲಿ ವೆನೆಜುವೆಲಾದ ಪ್ರಮುಖ ಪಾಲುದಾರ ರಾಷ್ಟ್ರವಾಗಿದ್ದು, ಭಾರತೀಯ ಸಾರ್ವಜನಿಕ ವಲಯದ ಉದ್ದಿಮೆಗಳು ವೆನೆಜುವೆಲಾದ ಇಂಧನ ವಲಯದಲ್ಲಿ ಗಣನೀಯ ಹೂಡಿಕೆ ಮಾಡಿವೆ. ರೋಡ್ರಿಗಸ್ ಅವರ ಈ ಭೇಟಿಯು ದ್ವಿಪಕ್ಷೀಯ ಸಂಬಂಧಗಳನ್ನು ಮತ್ತಷ್ಟು ಬಲಪಡಿಸುತ್ತದೆ ಎಂದು ನಿರೀಕ್ಷಿಸಲಾಗಿದೆ.

<><><><>

ಯೋಗವು ವಿಶ್ವದಾದ್ಯಂತ ಅಪಾರ ಜನಪ್ರಿಯತೆಯನ್ನು ಗಳಿಸುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಅವರು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಇಂದು ಗುಜರಾತ್‌ನ ಅಹಮದಾಬಾದ್‌ನಲ್ಲಿ ನಡೆಯಲಿರುವ ೨೦೨೬ರ ಮೊದಲ ವಿಶ್ವ ಯೋಗಾಸನ ಕ್ರೀಡಾ ಚಾಂಪಿಯನ್‌ಶಿಪ್‌ನಲ್ಲಿ ವರ್ಚುವಲ್ ಮೂಲಕ ಭಾಗವಹಿಸುತ್ತಿರುವುದಾಗಿ ತಿಳಿಸಿದ್ದಾರೆ. ಚಾಂಪಿಯನ್‌ಶಿಪ್ ಜಗತ್ತಿನಾದ್ಯಂತದ ಎಲ್ಲಾ ಯೋಗ ಉತ್ಸಾಹಿಗಳನ್ನು ಒಟ್ಟುಗೂಡಿಸಿದೆ. ಯೋಗಾಸನದ ಜಾಗತಿಕ ಕ್ರೀಡಾ ನೀಲನಕ್ಷೆಯಲ್ಲಿ ಇದು ಮಹತ್ವದ ಮೈಲಿಗಲ್ಲು ಎಂದು ವ್ಯಾಖ್ಯಾನಿಸಿರುವ ಪ್ರಧಾನಿ, ಈ ಕಾರ್ಯಕ್ರಮ ಆಯೋಜಿಸಿರುವವರಿಗೆ ಮತ್ತು ಅದರಲ್ಲಿ ಭಾಗವಹಿಸುವವರಿಗೆ ಅವರು ತಮ್ಮ ಶುಭಾಶಯಗಳನ್ನು ತಿಳಿಸಿದ್ದಾರೆ.

<><><><>

ಪ್ರಜಾಪ್ರಭುತ್ವವನ್ನು ಬಲಪಡಿಸಲು ಲೆಕ್ಕಪರಿಶೋಧನೆಯು ಒಂದು ಪ್ರಮುಖ ಸಾಧನವಾಗಿದೆ ಮತ್ತು ಸಾರ್ವಜನಿಕರ ಹಣವನ್ನು ನ್ಯಾಯಸಮ್ಮತವಾಗಿ ಸಾರ್ವಜನಿಕ ಒಳಿತಿಗಾಗಿ ಬಳಸಲಾಗುತ್ತಿದೆ ಎಂದು ನಾಗರಿಕರಿಗೆ ಭರವಸೆ ನೀಡುತ್ತದೆ ಎಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಹೇಳಿದ್ದಾರೆ. ನವದೆಹಲಿಯಲ್ಲಿ ನಿನ್ನೆ ವೆನ್ ಆಡಿಟ್ ಮ್ಯಾಟರ್ಸ್: ಸಿಎಜಿ ಇಂಟರ್ವೆನ್ಷನ್ಸ್ ದಟ್ ಮೇಡ್ ಎ ಡಿಫರೆನ್ಸ್" ಪುಸ್ತಕ ಬಿಡುಗಡೆ ಸಮಾರಂಭದಲ್ಲಿ ಮಾತನಾಡಿದ ಅವರು, ಸರ್ಕಾರದ ವ್ಯವಸ್ಥೆಗಳನ್ನು ಸುಧಾರಿಸಲು ಮತ್ತು ನ್ಯೂನತೆಗಳನ್ನು ಸರಿಪಡಿಸಲು ಲೆಕ್ಕಪರಿಶೋಧನೆ ಸಹಾಯ ಮಾಡುವುದಲ್ಲದೆ, ರಾಜ್ಯ ಮತ್ತು ನಾಗರಿಕರ ನಡುವಿನ ನಂಬಿಕೆಯನ್ನು ಬಲಪಡಿಸುತ್ತದೆ ಎಂದರು. ಸಾರ್ವಜನಿಕ ಜೀವನದಲ್ಲಿ ನೈತಿಕತೆಯ ಮಹತ್ವವನ್ನು ಪ್ರಸ್ತಾಪಿಸಿದ ಉಪರಾಷ್ಟ್ರಪತಿ ನೈತಿಕತೆ ಮತ್ತು ಲೆಕ್ಕಪರಿಶೋಧನೆಯ ಸಂಯೋಜನೆಯು

ಪರಿವರ್ತನೆಗಳನ್ನು ತರಬಲ್ಲದು, ಇದು ಸಾರ್ವಜನಿಕ ಸೇವೆಗಳ ಸುಧಾರಣೆ, ಸಾರ್ವಜನಿಕ ಸಂಪನ್ಮೂಲಗಳ ಪರಿಣಾಮಕಾರಿ ಬಳಕೆ ಸಾರ್ವಜನಿಕ ನಂಬಿಕೆಯನ್ನು ಹೆಚ್ಚಿಸುತ್ತದೆ ಎಂದು ಹೇಳಿದರು. ಶಾಸಕಾಂಗ ಬಜೆಟ್‌ಗಳ ಅನುಮೋದನೆಯೊಂದಿಗೆ ಆರಂಭವಾಗುವ ಮತ್ತು ಸಾರ್ವಜನಿಕ ಲೆಕ್ಕಪತ್ರ ಸಮಿತಿಗಳ ಲೆಕ್ಕಪರಿಶೋಧನೆ ಮೂಲಕ ಮುಂದುವರಿಯುವ ಸಂಸದೀಯ ಪ್ರಜಾಪ್ರಭುತ್ವದಲ್ಲಿ ಹೊಣೆಗಾರಿಕೆಯ ಮಹತ್ವವನ್ನು ವಿವರಿಸಿದರು.

<><><><>

ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ನವದೆಹಲಿಯಲ್ಲಿ ನಿನ್ನೆ ಲಾವೊ ಗಣರಾಜ್ಯದ ಉಪಪ್ರಧಾನಮಂತ್ರಿ ಮತ್ತು ವಿದೇಶಾಂಗ ಸಚಿವ ಥೋಂಗ್ಸವನ್ ಫೋಮ್ವಿಹಾನೆ ಅವರೊಂದಿಗೆ ೧೦ನೇ ಭಾರತ-ಲಾವೊ ಪಿಡಿಆರ್ ಜಂಟಿ ಆಯೋಗದ ಸಭೆಯ ಸಹ-ಅಧ್ಯಕ್ಷತೆ ವಹಿಸಿದ್ದರು. ಸಭೆಯಲ್ಲಿ ವ್ಯಾಪಾರ ಮತ್ತು ಹೂಡಿಕೆ, ಆರೋಗ್ಯ, ಇಂಧನ, ಡಿಜಿಟಲ್ ಸಂಪರ್ಕ, ಅಭಿವೃದ್ಧಿ ಪಾಲುದಾರಿಕೆ, ಸಾಮರ್ಥ್ಯ ವೃದ್ಧಿ ಮತ್ತು ಸಂಸ್ಕೃತಿ ಸೇರಿ ವಿವಿಧ ಅಂಶಗಳ ಕುರಿತು ವಿವರವಾದ ಚರ್ಚೆ ನಡೆಸಿದರು. ಅವರು ಭಾರತ - ಆಸಿಯಾನ್ ಸಹಕಾರವನ್ನು ಮತ್ತಷ್ಟು ಹೆಚ್ಚಿಸುವುದರ ಜೊತೆಗೆ ಎರಡೂ ದೇಶಗಳ ಬೆಳವಣಿಗೆಗಳ ಬಗ್ಗೆಯೂ ಸಮಾಲೋಚಿಸಿದರು. ನಂತರ ಮಾತನಾಡಿದ ಡಾ. ಜೈಶಂಕರ್, ಭಾರತ ಮತ್ತು ಲಾವೊ ಪಿಡಿಆರ್ ಬೌದ್ಧಧರ್ಮ ಮತ್ತು ರಾಮಾಯಣದ ಸಾಮಾನ್ಯ ಪರಂಪರೆಯಲ್ಲಿ ಪ್ರತಿಫಲಿಸುವ ನಿಕಟ ನಾಗರಿಕ ಸಂಬಂಧಗಳನ್ನು ಹೊಂದಿವೆ. ಪ್ರಧಾನಿ ನರೇಂದ್ರ ಮೋದಿ ಅವರು ಅಕ್ಟೋಬರ್ ೨೦೨೪ ರಲ್ಲಿ ಲಾವೊ ಭೇಟಿ ನೀಡಿದ್ದರು, ಆ ವೇಳೆ ಹಲವು ಒಪ್ಪಂದಗಳಿಗೆ ಸಹಿ ಹಾಕಲಾಗಿತ್ತು ಎಂದರು. ರಾಜಕೀಯ ಸಹಕಾರ, ಆರ್ಥಿಕ ಸಂಬಂಧಗಳು, ರಕ್ಷಣೆ, ಅಭಿವೃದ್ಧಿ ಪಾಲುದಾರಿಕೆಗಳು, ಶಿಕ್ಷಣ, ಸಾಂಸ್ಕೃತಿಕ ವಿನಿಮಯ ಮತ್ತು ಬಹುಪಕ್ಷೀಯ ಸಹಕಾರ ಸೇರಿ ಹಲವು ಒಪ್ಪಂದಗಳ ಪ್ರಗತಿ ಪರಿಶೀಲಿಸಲು ಮತ್ತು ವ್ಯಾಪಕ ಶ್ರೇಣಿಯ ಕಾರ್ಯಸೂಚಿಯನ್ನು ಅನ್ವೇಷಿಸಲು ಎರಡೂ ದೇಶಗಳಿವೆ ಅವಕಾಶವಿದೆ ಎಂದು ಹೇಳಿದರು.

<><><><>

ಕೇಂದ್ರ ಗೃಹ ಸಚಿವ ಅಮಿತ್ ಶಾ ಮೇಘಾಲಯದ ಶಿಲ್ಲಾಂಗ್‌ನಲ್ಲಿಂದು ನಡೆಯಲಿರುವ ಈಶಾನ್ಯ ಮಂಡಳಿಯ ೭೩ನೇ ಸಮಗ್ರ ಗೋಷ್ಠಿಯ ಅಧ್ಯಕ್ಷತೆ ವಹಿಸಲಿದ್ದಾರೆ. ಪ್ರಾದೇಶಿಕ ಅಭಿವೃದ್ಧಿಯ ನಿರ್ಣಾಯಕ ವಲಯಗಳಿಗಾಗಿ ರಚಿಸಲಾದ ಸಿಎಂ ಉನ್ನತ ಮಟ್ಟದ ಕಾರ್ಯಪಡೆಗಳು ಸಾಧಿಸಿದ

ಪ್ರಗತಿಯ ಕುರಿತು ಗೋಷ್ಠಿಯಲಿ ಚರ್ಚಿಸಲಾಗುವುದು. ಅದರಲ್ಲಿ ಪ್ರವಾಸೋದ್ಯಮ, ಕೃಷಿ ಮತ್ತು ತೋಟಗಾರಿಕೆ, ಹೂಡಿಕೆ ಪ್ರಚಾರ, ಹಾಲು, ಮೊಟ್ಟೆ, ಮೀನು ಮತ್ತು ಮಾಂಸದಲ್ಲಿ ಸ್ವಾವಲಂಬನೆ, ಕ್ರೀಡಾ ಪ್ರಚಾರ, ಆರ್ಥಿಕ ಕಾರಿಡಾರ್ ಅಭಿವೃದ್ಧಿ, ಮೂಲಸೌಕರ್ಯ ಮತ್ತು ಸಂಪರ್ಕ ಮತ್ತು ಕೈಮಗ್ಗ ಮತ್ತು ಕರಕುಶಲ ವಸ್ತುಗಳ ಕುರಿತು ಪ್ರಾತ್ಯಕ್ಷಿಕೆಗಳನ್ನು ಪ್ರಸ್ತುತ ಪಡಿಸಲಾಗುವುದು. ೨೦೪೭ರ ವೇಳೆಗೆ ಈಶಾನ್ಯ ಪ್ರದೇಶವನ್ನು ಆರ್ಥಿಕ ಬೆಳವಣಿಗೆ, ಸಂಪರ್ಕ, ನಾವೀನ್ಯತೆ, ಸುಸ್ಥಿರತೆ ಮತ್ತು ಸಾಂಸ್ಕೃತಿಕ ಸಮೃದ್ಧಿಯ ತಾಣವನ್ನಾಗಿ ಪರಿವರ್ತಿಸಲು ದೀರ್ಘಾವಧಿಯ ನೀಲನಕ್ಷೆಯನ್ನು ರೂಪಿಸುವ ಈಶಾನ್ಯ ವಿಷನ್ ಪ್ಲಾನ್ ೨೦೪೭ ಕುರಿತು ಸಭೆ ಚರ್ಚಿಸುತ್ತದೆ. ಈಶಾನ್ಯ ಪ್ರದೇಶದ ಅಭಿವೃದ್ಧಿ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ, ರಾಜ್ಯ ಸಚಿವ ಸುಕಾಂತ ಮಜುಂದಾರ್, ಎಂಟು ಈಶಾನ್ಯ ರಾಜ್ಯಗಳ ರಾಜ್ಯಪಾಲರು ಮತ್ತು ಮುಖ್ಯಮಂತ್ರಿಗಳು, ಸಂಸದರು ಮತ್ತು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಹಿರಿಯ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಲಿದ್ದಾರೆ.

<><><><>

ಎರಡು ದಿನಗಳ ತ್ರಿಪುರಾ ಭೇಟಿಗಾಗಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಸಂಜೆ ಅಗರ್ತಲಾಕ್ಕೆ ಆಗಮಿಸಲಿದ್ದಾರೆ. ಈ ವೇಳೆ ಅಮಿತ್ ಶಾ ಅವರು ಪುಷ್ಪಬಂತ ಪ್ಯಾಲೇಸ್ ಹೋಟೆಲ್‌ನ ಶಿಲಾನ್ಯಾಸ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ, ಲಂಕಾಮುರಾದಲ್ಲಿರುವ ಗಡಿ ಭದ್ರತಾ ಪಡೆ -ಬಿಎಸ್‌ಎಫ್ ಗಡಿ ಹೊರಠಾಣೆಗೆ ಭೇಟಿ ನೀಡಲಿದ್ದಾರೆ ಮತ್ತು ರಾಜ್ಯ ಮತ್ತು ಕೇಂದ್ರ ಭದ್ರತಾ ಅಧಿಕಾರಿಗಳೊಂದಿಗೆ ಉನ್ನತ ಮಟ್ಟದ ಸಭೆ ನಡೆಸಲಿದ್ದಾರೆ.

<><><><>

ಕೇಂದ್ರ ಹಣಕಾಸು ಹಾಗೂ ಕಾರ್ಪೋರೇಟ್ ವ್ಯವಹಾರಗಳ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಇಂದು ಕರ್ನಾಟಕದ ಯಾದಗಿರಿ ಜಿಲ್ಲೆಯ ಬದ್ದೆಪಲ್ಲಿಯಲ್ಲಿ ರೈತರ ತರಬೇತಿ ಮತ್ತು ಸಾಮಾನ್ಯ ಸೌಲಭ್ಯ ಕೇಂದ್ರವನ್ನು ಉದ್ಘಾಟಿಸಲಿದ್ದಾರೆ. ಕಲ್ಯಾಣ ಸಂಪದ ಯೋಜನೆಯಡಿ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಸಂಸದರ ಅಭಿವೃದ್ಧಿ ಯೋಜನೆಯ ಭಾಗವಾಗಿ ಕೃಷಿ ಸಂಸ್ಕರಣೆಯನ್ನು ಉತ್ತೇಜಿಸಲು ಈ ಕೇಂದ್ರವನ್ನು ಆರಂಭಿಸಲಾಗುತ್ತಿದೆ.

<><><><>

ಕೇರಳ ಮತ್ತು ಮಾಹೆಯಲ್ಲಿ ಇಂದು ಭಾರೀ ಮಳೆಯಾಗುವ ಸಂಭವವಿದ್ದು, ಭಾರತೀಯ ಹವಾಮಾನ ಇಲಾಖೆಯು ಆರೆಂಜ್ ಅಲರ್ಟ್ ಘೋಷಿಸಿದೆ. ಮುಂದಿನ ಎರಡು ದಿನಗಳಲ್ಲಿ

ಉತ್ತರಾಖಂಡ, ಈಶಾನ್ಯ ಭಾರತದ ಕೆಲವು ಭಾಗಗಳು, ಪಶ್ಚಿಮ ಬಂಗಾಳ, ಕರ್ನಾಟಕ, ಗೋವಾ, ತಮಿಳುನಾಡು, ಪುದುಚೇರಿ, ಕರೈಕಲ್, ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳು ಮತ್ತು ಲಕ್ಷದ್ವೀಪಗಳಲ್ಲಿಯೂ ಭಾರಿ ಮಳೆಯಾಗುವ ನಿರೀಕ್ಷೆಯಿದೆ. ಪೂರ್ವ ರಾಜಸ್ಥಾನ, ಹಿಮಾಚಲ ಪ್ರದೇಶ, ಮಧ್ಯಪ್ರದೇಶ, ಜಮ್ಮು-ಕಾಶ್ಮೀರ-ಲಡಾಖ್-ಗಿಲ್ಗಿಟ್-ಬಾಲ್ಟಿಸ್ತಾನ್-ಮುಜಫರಾಬಾದ್‌ನಲ್ಲಿ ಇಂದು ಗುಡುಗು ಸಹಿತ ಮಳೆಯಾಗಲಿದೆ ಎಂದು ಇಲಾಖೆ ಮುನ್ಸೂಚನೆ ನೀಡಿದೆ. ಈ ಮಧ್ಯೆ, ದೆಹಲಿ, ಚಂಡೀಗಢ, ಹರಿಯಾಣ, ಪಂಜಾಬ್, ಮಧ್ಯಪ್ರದೇಶ, ರಾಜಸ್ಥಾನ, ಕರ್ನಾಟಕ, ತೆಲಂಗಾಣ ಮತ್ತು ವಿದರ್ಭದಲ್ಲಿ ಇಂದು ಗುಡುಗು ಸಹಿತ ಮಳೆಯಾಗುವ ನಿರೀಕ್ಷೆಯಿದೆ. ಮುಂದಿನ ಎರಡು ದಿನಗಳಲ್ಲಿ ಉತ್ತರ ಪ್ರದೇಶ, ಆಂಧ್ರಪ್ರದೇಶ, ಗುಜರಾತ್, ಜಾರ್ಖಂಡ್ ಮತ್ತು ಮಹಾರಾಷ್ಟ್ರದಲ್ಲಿ ಗುಡುಗು ಸಹಿತ ಮಳೆಯಾಗುವ ನಿರೀಕ್ಷೆಯಿದೆ ಎಂದು ಐಎಂಡಿ ತಿಳಿಸಿದೆ. ಮುಂದಿನ ಎರಡು ದಿನಗಳಲ್ಲಿ ಪೂರ್ವ ಭಾರತದಲ್ಲಿ ಗರಿಷ್ಠ ತಾಪಮಾನದಲ್ಲಿ ೨ ರಿಂದ ೩ ಡಿಗ್ರಿ ಸೆಲ್ಸಿಯಸ್ ಕ್ರಮೇಣ ಏರಿಕೆಯಾಗುವ ನಿರೀಕ್ಷೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ರಾಜಧಾನಿ ದೆಹಲಿಯಲ್ಲಿ ಗರಿಷ್ಠ ತಾಪಮಾನ ಸುಮಾರು ೩೮ ರಿಂದ ೪೦ ಡಿಗ್ರಿ ಸೆಲ್ಸಿಯಸ್, ಕನಿಷ್ಠ ತಾಪಮಾನ ೨೭ ರಿಂದ ೨೯ ಡಿಗ್ರಿ ಸೆಲ್ಸಿಯಸ್ ಸಾಧ್ಯತೆ.

<><><><>

ಗೋವಾದ ಮಾರ್ಗೋದಲ್ಲಿರುವ ಪಂಡಿತ್ ಜವಾಹರಲಾಲ್ ನೆಹರು ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಸ್ಯಾಫ್ ಮಹಿಳಾ ಚಾಂಪಿಯನ್‌ಶಿಪ್ ೨೦೨೭ ರ ಸೆಮಿಫೈನಲ್‌ನಲ್ಲಿ ಭೂತಾನ್ ತಂಡವನ್ನು ೧-೦ ಗೋಲುಗಳಿಂದ ಸೋಲಿಸುವ ಮೂಲಕ ಭಾರತದ ಫುಟ್‌ಬಾಲ್ ತಂಡ ಫೈನಲ್ ತಲುಪಿದೆ. ಸ್ಯಾನ್‌ಫಿಡಾ ನೊಂಗ್ರಮ್ ಪಂದ್ಯದ ಏಕೈಕ ಗೋಲು ಗಳಿಸಿದರು. ಫೈನಲ್ ಪಂದ್ಯದಲ್ಲಿ ಭಾರತ ತಂಡ ಬಾಂಗ್ಲಾದೇಶವನ್ನು ಎದುರಿಸಲಿದೆ. ದಾಖಲೆಯ ಐದು ಬಾರಿ ಸ್ಯಾಫ್ ಮಹಿಳಾ ಚಾಂಪಿಯನ್‌ಶಿಪ್ ವಿಜೇತರಾದ ಭಾರತ ಆರು ವರ್ಷಗಳ ನಂತರ ಪಂದ್ಯಾವಳಿಯಲ್ಲಿ ಫೈನಲ್ ಆಡಲಿದೆ. ಕೊನೆಯ ಬಾರಿ ಭಾರತವು ನೇಪಾಳವನ್ನು ಸೋಲಿಸಿ ೨೦೧೯ ರ ಆವೃತ್ತಿಯನ್ನು ಗೆದ್ದುಕೊಂಡಿತ್ತು. ೨೦೨೨ ಮತ್ತು ೨೦೨೪ ರ ಆವೃತ್ತಿಗಳಲ್ಲಿ ಭಾರತೀಯ ಮಹಿಳಾ ಫುಟ್‌ಬಾಲ್ ತಂಡವು ಸೆಮಿಫೈನಲ್‌ನಲ್ಲಿ ಹೊರಬಿದ್ದಿತ್ತು. ಮತ್ತೊಂದು ಸೆಮಿಫೈನಲ್ ಪಂದ್ಯದಲ್ಲಿ ಬಾಂಗ್ಲಾದೇಶ

ತಂಡ ನೇಪಾಳವನ್ನು ೨-೧ ಗೋಲುಗಳಿಂದ ಸೋಲಿಸುವ ಮೂಲಕ ಸತತ ಮೂರನೇ ಬಾರಿಗೆ ಫೈನಲ್ ಪ್ರವೇಶಿಸಿದೆ.

<><><><>

ಇಂಡೋನೇಷ್ಯಾ ಓಪನ್ ಸೂಪರ್ ೧೦೦೦ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ, ಭಾರತದ ಆಯುಷ್ ಶೆಟ್ಟಿ, ಚೀನಾದ ವೆಂಗ್ ಹಾಂಗ್ ಯಾಂಗ್ ಅವರನ್ನು ೮-೨೧, ೨೨-೨೦, ೨೧-೧೫ ಅಂತರದಲ್ಲಿ ಸೋಲಿಸುವ ಮೂಲಕ ಎರಡನೇ ಸುತ್ತಿಗೆ ಪ್ರವೇಶಿಸಿದ್ದಾರೆ. ಮಿಶ್ರ ಡಬಲ್ಸ್‌ನಲ್ಲಿಯೂ ಭಾರತ ಗಮನಾರ್ಹ ಗೆಲುವು ಸಾಧಿಸಿತು, ರೋಹನ್ ಕಪೂರ್ ಮತ್ತು ರುತ್ವಿಕಾ ಗಡ್ಡೆ, ಚೈನೀಸ್ ತೈಪೆಯ ಯಾಂಗ್ ಪೊ-ಹ್ಸುವಾನ್ ಮತ್ತು ಹು ಲಿಂಗ್ ಫಾಂಗ್ ಅವರನ್ನು ೨೧-೧೪, ೨೧-೧೪ ನೇರ ಗೇಮ್‌ಗಳಿಂದ ಸೋಲಿಸಿದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>